**ಕರ್ನಾಟಕ ಸರ್ಕಾರ**

ಗ್ರಾಅಪ 89 ಗ್ರಾಇಂಕಾ 07

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ ,
ಬೆಂಗಳೂರು, ದಿನಾಂಕ 20.08.2007.

ಇವರಿಂದ

ಸರ್ಕಾರದ ಪ್ರಧಾನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,
ಬೆಂಗಳೂರು.

ಇವರಿಗೆ :

ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,

ಮಾನ್ಯರೇ,

ವಿಷಯ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸೋಲಾರ್ ನೀರು ಕಾಯಿಸುವ ಯಂತ್ರಗಳನ್ನು ಕಡ್ಡಾಯವಾಗಿ ಅಳವಡಿಸುವ ಕುರಿತು

ಉಲ್ಲೇಖ ಅಧ್ಯಕ್ಷರು ಮತ್ತು ವ್ಯವಸ್ಥಾಪಕ ನಿರ್ದೇಶಕರು, ವಿತರಣ ಕಂಪನಿಗಳು, KPTCL, ಬೆಂಗಳೂರು ರವರ ಪತ್ರ ಸಂಖ್ಯೆ : ಕವಿಪ್ರನಿನಿ/ವ್ಯನಿ/ಅಇಂ(ವಿ)/(ಎಂಐಎಸ್) /07-08 ದಿನಾಂಕ 07.08.2007

ಉಲ್ಲೇಖಿತ ಪತ್ರದಲ್ಲಿ ಅಧ್ಯಕ್ಷರು ಮತ್ತು ವ್ಯವಸ್ಥಾಪಕ ನಿರ್ದೇಶಕರು, ವಿತರಣ ಕಂಪನಿಗಳು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು ರವರು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಎರಡು ಕೊಠಡಿಗಳಿಗಿಂತ ಮೇಲ್ಪಟ್ಟು ನಿರ್ಮಿಸುವ RCC ಮನೆಗಳಿಗೆ ಸೋಲಾರ ವಾಟರ್ ಹೀಟರ್ ಗಳನ್ನು ಅಳವಡಿಸಲು ಹಾಗೂ ಸರ್ಕಾರಿ/ಸರ್ಕಾರೇತರ ಸಂಸ್ಥೆ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ, ಹೆಚ್ಚಿನ ಪ್ರಮಾಣದಲ್ಲಿ ಬೆಳಕನ್ನು ಪಡೆಯುವ ದೃಷ್ಟಿಯಿಂದ CFL ಬಲ್ಬ್ ಗಳನ್ನು ಉಪಯೋಗಿಸಲು ನಿರ್ದೇಶನ ನೀಡುವಂತೆ ಕೋರಿರುತ್ತಾರೆ.

ಆದ್ದರಿಂದ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕ ಆಸ್ಪತ್ರೆ, ವಿದ್ಯಾರ್ಥಿನಿಲಯ,ಕ್ರೀಡಾಂಗಣ, ಆಶ್ರಮ, ಸಾರ್ವಜನಿಕ ಸ್ಥಳಗಳಲ್ಲಿ ವಿದ್ಯುತ್ ಕೊರತೆ ನೀಗಿಸುವ ಹಾಗೂ ಹೆಚ್ಚುತ್ತಿರುವ ಪರಿಸರ ಮಾಲಿನ್ಯವನ್ನು ತಡೆಗಟ್ಟುವ ದಿಶೆಯಲ್ಲಿ ಸೋಲಾರ್ ವಾಟರ್ ಹೀಟರ್ ಮತ್ತು CFL ಬಲ್ಬ್‌ಗಳನ್ನು ಆದ್ಯತೆ ಮೇರೆಗೆ ಅಳವಡಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಕೋರಿದೆ.

ತಮ್ಮ ವಿಶ್ವಾಸಿ,

**(ಡಾ:ಎನ್.ಮಂಜುಳ)**
ನಿರ್ದೇಶಕರು(ಗ್ರಾಮೂಸೌ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಜಿಲ್ಲಾ ಪಂಚಾಯತ್ ಕಾರ್ಯಾಲಯ
ಉತ್ತರ ಕನ್ನಡ ಕಾರವಾರ
1 SEP 2007
ದಿನಾಂಕ ವಿಷಯ
ಅಧಿ. ಸೆಕಾ, ಮುಕಾ.

1192

Recd the letter from Mr. H. Subramanya on 5-10-2007 F.N.
5/x/07

ಜಿಲ್ಲಾ ಪಂಚಾಯತ್ ಕಾರ್ಯಾಲಯ
ಉತ್ತರ ಕನ್ನಡ ಕಾರವಾರ
BCM 11 SEP 2007
ದಿನಾಂಕ: ವಿಷಯ
ಅಧಿ. ಸೆಕಾ. ಮುಕಾ.